ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

**ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

**ಸಂಖ್ಯೆ : ವಾಇ : ಉ ನಿ : ಸುಮಪ : 2017–18** **ದಿನಾಂಕ: 8–9–2017**

# ಪತ್ರಿಕಾ ಆಮಂತ್ರಣ

1. **ಬೆಂಗಳೂರು ನಗರದ** ಭದ್ರತೆ ಹಾಗೂ ಇನ್ನಿತರ ವಿಚಾರಗಳಿಗೆ ಸಂಬಂಧಿಸಿದಂತೆ ಪೊಲೀಸ್ ಅಧಿಕಾರಿಗಳೊಂದಿಗೆ ಚರ್ಚೆ:

ಅಧ್ಯಕ್ಷತೆ:
ರಾಮಲಿಂಗಾರೆಡ್ಡಿ,
ಗೃಹ ಸಚಿವರು,

ದಿನಾಂಕ: 9–9–2017 ಶನಿವಾರ, ಬೆಳಿಗ್ಗೆ 11–00 ಗಂಟೆಗೆ
ಸ್ಥಳ: ಕೊಠಡಿ ಸಂಖ್ಯೆ 419, 4 ನೇ ಮಹಡಿ, ವಿಕಾಸ ಸೌಧ, ಬೆಂಗಳೂರು

2. ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನಾಚರಣೆ:

ಮುಖ್ಯ ಅತಿಥಿ:
ಬಿ. ರಮಾನಾಥ ರೈ, ಅರಣ್ಯ ಸಚಿವರು.

ಅಧ್ಯಕ್ಷತೆ:
ಪಿ.ವಿ. ರವಿಕುಮಾರ್, ಅಪರ ಮುಖ್ಯ ಕಾರ್ಯದರ್ಶಿ, ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ.

ದಿನಾಂಕ: 11–09–2017, ಸೋಮವಾರ, ಸಮಯ : ಬೆಳಿಗ್ಗೆ 10.00 ಗಂಟೆಗೆ.

ಸ್ಥಳ: ಅರಣ್ಯ ಭವನ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 003.

3. ದೈಹಿಕ ವಿಕಲಚೇತನರಿಗೆ ಯಂತ್ರಚಾಲಿತ ದ್ವಿಚಕ್ರ ವಾಹನಗಳನ್ನು ವಿತರಿಸುವ ಕಾರ್ಯಕ್ರಮ:

**ವಿತರಿಸುವವರು:**
**ಸಿದ್ದರಾಮಯ್ಯ, ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ.**

ಅಧ್ಯಕ್ಷತೆ:
ಆರ್. ರೋಷನ್ ಬೇಗ್, ನಗರಾಭಿವೃದ್ಧಿ ಸಚಿವರು.

ದಿನಾಂಕ: 11–09–2017, ಸೋಮವಾರ, ಸಮಯ : ಬೆಳಿಗ್ಗೆ 10.30 ಗಂಟೆಗೆ.
ಸ್ಥಳ: ವಿಧಾನಸೌಧದ ಮುಂಭಾಗ, ಬೆಂಗಳೂರು.

ಸಂಖ್ಯೆ 41/167

# ಪತ್ರಿಕಾ ಪ್ರಕಟಣೆ

## ಗ್ರಂಥಾಲಯ ಅಪ್ರೆಂಟಿಸ್ ಟ್ರೈನಿ- ಅರ್ಜಿ ಆಹ್ವಾನ

**ಬೆಂಗಳೂರು, ಸೆಪ್ಟೆಂಬರ್ 8 ( ಕರ್ನಾಟಕ ವಾರ್ತೆ) :**

**ಕರ್ನಾಟಕ ಸರ್ಕಾರ ಸಚಿವಾಲಯ ಗ್ರಂಥಾಲಯದಲ್ಲಿ 2017–18 ನೇ ಸಾಲಿನ ಒಂದು ವರ್ಷದ ಅವಧಿಗೆ ಅಪ್ರೆಂಟಿಸ್ ಟ್ರೈನಿಗಳನ್ನು ನೇಮಕ ಮಾಡಿಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ.**

**ಬ್ಯಾಚಲರ್ ಆಫ್ ಲೈಬ್ರರಿ ಆಂಡ್ ಇನ್ಪರ್ಮೇಷನ್ ಸೈನ್ಸ್ (ಬಿ.ಎಲ್.ಐ.ಎಸ್.ಸಿ) ವಿದ್ಯಾರ್ಹತೆ ಹೊಂದಿರುವವರು ಗ್ರಾಜುಯೆಟ್ ಅಪ್ರೆಂಟಿಸ್ ಟ್ರೈನಿ (ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ) ಅರ್ಜಿ ಸಲ್ಲಿಸಬಹುದಾಗಿದ್ದು ಒಟ್ಟು 12 ಜನರಿಗೆ ಅವಕಾಶವಿದೆ, ಇವರುಗಳಿಗೆ ರೂ 10,000/–. ಮಾಹೆಯಾನ ಸ್ಟೈಫಂಡ್ ನೀಡಲಾಗುವುದು.**

**ಡಿಪ್ಲೋಮಾ ಇನ್ ಲೈಬ್ರವರಿ ಆಂಡ್ ಇನ್ಫರ್ಮೇಷನ್ ಸೈನ್ಸ್ ವಿದ್ಯಾರ್ಹತೆ ಹೊಂದಿರುವವರು ಟೆಕ್ನಿಶಿಯನ್ ಅಪ್ರೆಂಟಿಸ್ ಟ್ರೈನಿ (ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ) ವಿಭಾಗದಲ್ಲಿ ಅರ್ಜಿ ಸಲ್ಲಿಸಬಹುದು. ಒಟ್ಟು 10 ಸ್ಥಾನಗಳಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಇವರುಗಳಿಗೆ ಸ್ಟೈಫಂಡ್ – ರೂ. 8,000/–. ದೊರೆಯಲಿದೆ.**

**ಟೆಕ್ನಿಶಿಯನ್ ಅಪ್ರೆಂಟಿಸ್ ಟ್ರೈನಿ (ಕಮರ್ಷಿಯಲ್ ಪ್ರಾಕ್ಟೀಸ್) ಗಾಗಿ ಡಿಪ್ಲೋಮಾ ಇನ್ ಕಮರ್ಷಿಯಲ್ ಪ್ರಾಕ್ಟೀಸ್ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ. ಒಟ್ಟು 2 ಸ್ಥಾನಗಳಿದ್ದು – ಇವರುಗಳಿಗೆ ರೂ 8,000 ಮಾಹೆಯಾನ ಸ್ಟೈಫಂಡ್ ನೀಡಲಾಗುವುದು.**

ನಿಗದಿತ ಶಿಕ್ಷಣಾರ್ಹತೆಯನ್ನು 2015 ಮೇ ತಿಂಗಳ ನಂತರ ಪಡೆದವರು ಮಾತ್ರ ಈ ತರಬೇತಿಗೆ ಅರ್ಹರಾಗಿರುತ್ತಾರೆ. ತರಬೇತಿಗೆ ಅಭ್ಯರ್ಥಿಗಳನ್ನು ಅವರು ಗಳಿಸಿದ ಅಂಕಗಳ (ಮೆರಿಟ್) ಹಾಗೂ ಮೀಸಲಾತಿಯ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು. ಈಗಾಗಲೇ ಅಪ್ರೆಂಟಿಸ್ ತರಬೇತಿ ಪಡೆದವರಾಗಿದ್ದರೆ ಅಂತಹವರು ಅರ್ಜಿಗಳನ್ನು ಸಲ್ಲಿಸುವಂತಿಲ್ಲ ಎಂಬ ನಿಬಂಧನೆಯನ್ನು ಹಾಕಿದೆ.

ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಅರ್ಜಿಯನ್ನು ಮುಖ್ಯ ಗ್ರಂಥಾಧಿಕಾರಿ, ಸಚಿವಾಲಯ ಗ್ರಂಥಾಲಯ, ಕೊಠಡಿ ಸಂಖ್ಯೆ 11, ನೆಲಮಹಡಿ, ವಿಧಾನಸೌಧ, ಬೆಂಗಳೂರು – 560 001 ಇವರಿಗೆ ಸೆಪ್ಟೆಂಬರ್ 16 ರೊಳಗಾಗಿ ತಲುಪುವಂತೆ ಸಲ್ಲಿಸಬೇಕು.

ಅರ್ಜಿಯೊಂದಿಗೆ ಎಸ್.ಎಸ್.ಎಲ್.ಸಿ. ಪ್ರಮಾಣ ಪತ್ರ, ಜಾತಿ ಪ್ರಮಾಣ ಪತ್ರ, ಲೈಬ್ರರಿ ಸೈನ್ಸ್‌ನಲ್ಲಿ ಪದವಿ (ಬಿಎಲ್ಐಎಸ್ಸಿ) ಅಥವಾ ಲೈಬ್ರರಿ ಸೈನ್ಸ್‌ನಲ್ಲಿ ಡಿಪ್ಲೋಮಾ ಅಥವಾ ಕಮರ್ಷಿಯಲ್ ಪ್ರಾಕ್ಟೀಸ್‌ನಲ್ಲಿ ಡಿಪ್ಲೋಮಾ ಹೊಂದಿರುವ (ಎಲ್ಲಾ ಸೆಮಿಸ್ಟರ್‌ಗಳ) ಪ್ರಮಾಣ ಪತ್ರಗಳ ಜೆರಾಕ್ಸ್ ಪ್ರತಿಗಳನ್ನು ಲಗತ್ತಿಸಬೇಕು. (ಎಲ್ಲಾ ಪ್ರಮಾಣ ಪತ್ರಗಳ ಜೆರಾಕ್ಸ್ ಪ್ರತಿಗಳನ್ನು ದೃಢೀಕರಿಸಿರಬೇಕು). ತಡವಾಗಿ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

ಅರ್ಜಿ ನಮೂನೆಯನ್ನು ವೆಬ್‌ಸೈಟ್ **http://vslib.kar.nic.in/** ರಲ್ಲಿ ಪಡೆಯಬಹುದಾಗಿದೆ ಎಂದು ಸಚಿವಾಲಯ ಗ್ರಂಥಾಲಯದ ಪ್ರಕಟಣೆ ತಿಳಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್

ಸಂಖ್ಯೆ 42/168

## ಯಂತ್ರಚಾಲಿತ ದ್ವಿಚಕ್ರ ವಾಹನ ನೀಡುವ ಕಾರ್ಯಕ್ರಮಕ್ಕೆ ಮುಖ್ಯಮಂತ್ರಿಗಳಿಂದ ಚಾಲನೆ

ಬೆಂಗಳೂರು, ಸೆಪ್ಟೆಂಬರ್ 8 ( ಕರ್ನಾಟಕ ವಾರ್ತೆ) :

ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆವತಿಯಿಂದ ರಾಜ್ಯಾದ್ಯಂತ ರೂ 14.00 ಕೋಟಿಗಳ ವೆಚ್ಚದಲ್ಲಿ 2000 ರಿಟ್ರೋಫಿಟೆಡ್ ದ್ವಿಚಕ್ರವಾಹನಗಳನ್ನು ವಿತರಿಸಲಾಗುತ್ತಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೆಪ್ಟೆಂಬರ್ 11 ರಂದು ಬೆಳಿಗ್ಗೆ 10.30 ಗಂಟೆಗೆ ವಿಧಾನಸೌಧದ ಮುಂಭಾಗದಲ್ಲಿ ಸಾಂಕೇತಿಕವಾಗಿ 108 ವಾಹನಗಳನ್ನು ವಿತರಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಿದ್ದಾರೆ.

ವಾರ್ಷಿಕ ರೂ 2.00 ಲಕ್ಷಗಳಿಗಿಂತ ಕಡಿಮೆ ಕುಟುಂಬದ ಆದಾಯ ಇರುವ 20 ರಿಂದ 60 ವರ್ಷ ವಯೋಮಾನದ ತೀವ್ರತೆರನಾದ ಚಲನವಲನ ವೈಕಲ್ಯತೆಯುಳ್ಳ ವಿಕಲಚೇತನರಿಗೆ

ಜೀವಿತಾವಧಿಯಲ್ಲಿ ಒಂದು ಸಲ ಯಂತ್ರಚಾಲಿತ ದ್ವಿಚಕ್ರ ವಾಹನವನ್ನು ನೀಡುವ ಯೋಜನೆಯನ್ನು ಸರ್ಕಾರವು 2014-15 ಸಾಲಿನಿಂದ ಅನುಷ್ಠಾನಗೊಳಿಸುತ್ತಿದೆ.

ನಗರಾಭಿವೃದ್ಧಿ ಸಚಿವ ಆರ್. ರೋಷನ್ ಬೇಗ್ ಅವರು ಸಮಾರಂಭದ ಅಧ್ಯಕ್ಷತೆಯನ್ನು ವಹಿಸುವರು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ, ಕನ್ನಡ ಮತ್ತು ಸಂಸ್ಕೃತಿ ಸಚಿವೆ ಶೀಮತಿ ಉಮಾಶ್ರೀ, ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನೆ ಹಾಗೂ ಬೆಂಗಳೂರು ನಗರ ಜಿಲ್ಲಾ ಉಸ್ತುವಾರಿ ಸಚಿವ ಕೆ.ಜೆ. ಜಾರ್ಜ್, ಗೃಹ ಸಚಿವ ರಾಮಲಿಂಗಾರೆಡ್ಡಿ, ಸಾರಿಗೆ ಸಚಿವ ಹೆಚ್. ಎಂ. ರೇವಣ್ಣ, ಬೃಹತ್ ಬೆಂಗಳೂರು ಮಹಾನಗರಪಾಲಿಕೆಯ ಮಹಾಪೌರರಾದ ಶ್ರೀಮತಿ ಜಿ. ಪದ್ಮಾವತಿ, ಬೃಹತ್ ಬೆಂಗಳೂರು ಮಹಾನಗರಪಾಲಿಕೆಯ ಉಪ ಮಹಾಪೌರರಾದ ಎಂ. ಆನಂದ್, ಬೆಂಗಳೂರು ಜಿಲ್ಲಾ ಪಂಚಾಯತ್ ಅಧ್ಯಕ್ಷ ಮುನಿರಾಜು ಹಾಗೂ ಬೆಂಗಳೂರು ಜಿಲ್ಲಾ ಪಂಚಾಯತ್ ಉಪಾಧ್ಯಕ್ಷೆ ಶ್ರೀಮತಿ ಪಾರ್ವತಿ ಚಂದ್ರಪ್ಪ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್

ಸಂಖ್ಯೆ 43/169

## ಅರ್ಹ ಅಭ್ಯರ್ಥಿಗಳ ಪಟ್ಟಿ ಪ್ರಕಟ

ಬೆಂಗಳೂರು, ಸೆಪ್ಟೆಂಬರ್ 8 ( ಕರ್ನಾಟಕ ವಾರ್ತೆ) :

ಕರ್ನಾಟಕ ಲೋಕಸೇವಾ ಆಯೋಗವು ಮೊರಾರ್ಜಿ ದೇಸಾಯಿ ವಸತಿಪದವಿ ಪೂರ್ವ ಕಾಲೇಜುಗಳಲ್ಲಿನ ಕನ್ನಡ 23+03 (ಹೈ.ಕ), ಭೌತಶಾಸ್ತ್ರ 23+03 (ಹೈ.ಕ) ಮತ್ತು ರಸಾಯನಶಾಸ್ತ್ರ ಉಪನ್ಯಾಸಕರು 23+03 (ಹೈ.ಕ) ಹುದ್ದೆಗಳಿಗೆ ಮೂಲ ದಾಖಲಾತಿಗಳ ಪರಿಶೀಲನೆಗೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ಅಬ್ಯರ್ಥಿಗಳ ಮಾಹಿತಿಗಾಗಿ ಆಯೋಗದ ಅಂಗರ್ಜಾಲದಲ್ಲಿ ಪ್ರಕಟಿಸಲಾಗಿದೆ, ಮೂಲ ದಾಖಲೆಗಳ ಪರಿಶೀಲನಾ ಕಾರ್ಯವನ್ನು ಸೆಪ್ಟೆಂಬರ್ 22 ರಂದು ನಡೆಸಲು ತೀರ್ಮಾನಿಸಲಾಗಿದೆ.

ಮೂಲ ದಾಖಲೆಗಳ ಪರಿಶೀಲನೆಗೆ ಅರ್ಹರಾದ ಅಭ್ಯರ್ಥಿಗಳ ಪಟ್ಟಿಯನ್ನು ಈಗಾಗಲೇ ಆಯೋಗದ ಅಂತರ್ಜಾಲದಲ್ಲಿ ಪ್ರಕಟಿಸಲಾಗಿದ್ದು, ಅಭ್ಯರ್ಥಿಗಳು ತಮ್ಮ ರುಜಿಸ್ಟ್ರೇಷನ್ ನಂ ನಮೂದಿಸಿ ಆಯೋಗದ ಅಂತರ್ಜಾಲ **"http://kpsc.kar.nic.in"** ಯಿಂದ ಡೌನ್‌ಲೋಡ್ ಮಾಡಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ

**: 8951107408 ಅನ್ನು ಸಂಪರ್ಕಿಸಬಹುದಾಗಿದೆ ಎಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.**

**ಎಸ್‌ಎಂ:ಜೆಡಿ:ಜಿಪಿಆರ್**

ಸಂಖ್ಯೆ 44/170

# ತಾತ್ಕಾಲಿಕ ಆಯ್ಕೆಪಟ್ಟಿ ಪ್ರಕಟ

**ಬೆಂಗಳೂರು, ಸೆಪ್ಟೆಂಬರ್ 8 ( ಕರ್ನಾಟಕ ವಾರ್ತೆ) :**

**ಕರ್ನಾಟಕ ಲೋಕಸೇವಾ ಆಯೋಗವು ಕೈಮಗ್ಗ ಮತ್ತು ಜವಳಿ ಇಲಾಖೆಯಲ್ಲಿ ಜವಳಿ ತನಿಖಾಧಿಕಾರಿ 08 (ಹೈ.ಕ) ಹುದ್ದೆಗಳಿಗೆ ಆಯೋಗದ ಅಂತರ್ಜಾಲದಲ್ಲಿ ಸೆಪ್ಟೆಂಬರ್ 7 ರಂದು ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಪ್ರಕಟಿಸಲಾಗಿದೆ. ಪ್ರಕಟಿಸಲಾದ ದಿನಾಂಕದಿಂದ 7 ದಿನಗಳೊಳಗಾಗಿ ಆಕ್ಷೇಪಣೆಗಳನ್ನು ಸಲ್ಲಿಸಬಹುದಾಗಿದೆ ಎಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.**

**ಎಸ್‌ಎಂ:ಜೆಡಿ:ಜಿಪಿಆರ್.**

ಸಂಖ್ಯೆ:45/171

# ಕಬ್ಬನ್‌ಪಾರ್ಕ್‌ನಲ್ಲಿ ಈ ಭಾನುವಾರ

**ಬೆಂಗಳೂರು, ಸೆಪ್ಟೆಂಬರ್ 7 ( ಕರ್ನಾಟಕ ವಾರ್ತೆ) :**

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. ದಿನಾಂಕ: 10-09-2017ರ ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1) ಬೆಳಿಗ್ಗೆ 06.00 ಗಂಟೆಯಿಂದ ಬೆಳಿಗ್ಗೆ 07.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಉದಯರಾಗ" ಎಂಬ

**ಶೀರ್ಷಿಕೆಯಡಿ** ಶ್ರೀ. ಮೃತ್ಯುಂಜಯ ಅಗಡಿ ಮತ್ತು ತಂಡ, ಧಾರವಾಡ ಜಿಲ್ಲೆ ರವರಿಂದ ಹಿಂದುಸ್ಥಾನಿ ಸಂಗೀತ **ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**

2) **ಸಂಜೆ 05.00 ಗಂಟೆಯಿಂದ ಸಂಜೆ 06.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ** ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಸಂಧ್ಯಾರಾಗ" **ಎಂಬ ಶೀರ್ಷಿಕೆಯಡಿ** ಶ್ರೀ. ಡಿ.ಓ.ಮೊರಾರ್ಜಿ ಮತ್ತು ತಂಡ, ಚಿತ್ರದುರ್ಗ ಜಿಲ್ಲೆ ರವರಿಂದ ಸುಗಮ ಸಂಗೀತ **ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**

3) **ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ** ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು **ಏರ್ಪಡಿಸಲಾಗಿದೆ.**

4) **ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ** ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ **ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.**

**ಈ ಭಾನುವಾರದ ವಿಶೇಷ ಕಾರ್ಯಕ್ರಮಗಳು:**

**I.ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ**

- ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ **ಯೂನಿವರ್ಸ್ ಆರ್ಟ್ ಫೌಂಡೇಶನ್** ಸಂಸ್ಥೆಯ ಸಹಯೋಗದೊಂದಿಗೆ **ಗುರು ಸುಮಾ ರಾಜೇಶ್** ರವರಿಂದ **ಭರತನಾಟ್ಯ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಬೆಳಿಗ್ಗೆ 8.00 ಗಂಟೆಯಿಂದ 9.00 ಗಂಟೆಯವರೆಗೆ **ಶ್ರೀವಾಣಿ ವಿದ್ಯಾ ಕೇಂದ್ರ, ಬಸವೇಶ್ವರ ನಗರ , ಬೆಂಗಳೂರು ಶಾಲಾ ವಿದ್ಯಾರ್ಥಿ ಕುಮಾರ.ಆದಿತ್ಯ ಶರ್ಮ ರವರಿಂದ ಹಾಡುಗಾರಿಕೆ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

**II.ಸ್ಥಳ: ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಹತ್ತಿರ**

- ಬೆಳಿಗ್ಗೆ 7:00 ರಿಂದ ಬೆಳಿಗ್ಗೆ 8:00 ಗಂಟೆಯವರೆಗೆ ಮೌಂಟ್ ಕಾರ್ಮೆಲ್ ಕಾಲೇಜ್ ನ ಎನ್.ಡಿ.ಸಿ.ಹೆಚ್.ಡಿ. ಯ 2ನೇ ವರ್ಷದ ವಿದ್ಯಾರ್ಥಿಗಳಿಂದ "ಮಕ್ಕಳು ಮತ್ತು ಮಹಿಳೆಯರ ಮೇಲಿನ ದೌರ್ಜನ್ಯ" ಕುರಿತು ಬೀದಿ ನಾಟಕ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

**III.ಸ್ಥಳ: ಬ್ಯಾಂಡ್ ಸ್ಟಾಂಡ್ ಹತ್ತಿರ**

- ಬೆಳಿಗ್ಗೆ 7:00 ರಿಂದ ಬೆಳಿಗ್ಗೆ 9:00 ಗಂಟೆ ವರೆಗೆ ಕರ್ನಾಟಕ ಫೆನ್ಸಿಂಗ್ ಅಸೋಸಿಯೇಷನ್ ರವರ ವತಿಯಿಂದ ಕತ್ತಿ ವರಸೆ ಪ್ರದರ್ಶನ

ಸಂಖ್ಯೆ:46/172

# ಪ್ರವಾಸ

**ಬೆಂಗಳೂರು, ಸೆಪ್ಟೆಂಬರ್ 7 ( ಕರ್ನಾಟಕ ವಾರ್ತೆ) :**

**ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಬಾಬುರಾವ್ ಚಿಂಚನಸೂರ್ ಅವರು ಸೆಪ್ಟೆಂಬರ್ 9 ರಿಂದ 13 ರವರೆಗೆ ಕಲಬುರಗಿ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳುವರು.**

ಸಂಖ್ಯೆ:47/173

# ಇಲಾಖಾ ಪರೀಕ್ಷೆ ಫಲಿತಾಂಶ ಪ್ರಕಟ

**ಬೆಂಗಳೂರು, ಸೆಪ್ಟೆಂಬರ್ 7 ( ಕರ್ನಾಟಕ ವಾರ್ತೆ) :**

**ಕರ್ನಾಟಕ ಲೋಕಸೇವಾ ಆಯೋಗವು 2017 ನೇ ಸಾಲಿನ ಪ್ರಥಮ ಅಧಿವೇಶನದ ಇಲಾಖಾ ಪರೀಕ್ಷೆಗಳ ಫಲಿತಾಂಶವನ್ನು ಆಯೋಗದ ವೆಬ್‌ಸೈಟ್ http://kpsc.kar.nic.in ನಲ್ಲಿ ಪ್ರಕಟಿಸಿದೆ.**

**ಅನುತ್ತೀರ್ಣ ಅಭ್ಯರ್ಥಿಗಳು ಅಂಕಗಳ ಮರು ಎಣಿಕೆಗೆ ಫಲಿತಾಂಶ ಪ್ರಕಟವಾದ ದಿನಾಂಕದಿಂದ 30 ದಿನಗಳೊಳಗಾಗಿ ನಿಗದಿತ ಶುಲ್ಕದೊಂದಿಗೆ ಅರ್ಜಿಯನ್ನು ಸಲ್ಲಿಸಲು ಪ್ರಕಟಣೆ ತಿಳಿಸಿದೆ.**

ಸಂಖ್ಯೆ:47/173

# ಇಲಾಖಾ ಪರೀಕ್ಷೆಗೆ ಅರ್ಜಿ ಆಹ್ವಾನ

**ಬೆಂಗಳೂರು, ಸೆಪ್ಟೆಂಬರ್ 7 ( ಕರ್ನಾಟಕ ವಾರ್ತೆ) :**

**ಕರ್ನಾಟಕ ಲೋಕಸೇವಾ ಆಯೋಗವು 2017 ನೇ ಸಾಲಿನ ದ್ವಿತೀಯ ಅಧಿವೇಶನದ ಇಲಾಖಾ ಪರೀಕ್ಷೆಗಳಿಗೆ ಸರ್ಕಾರಿ ನೌಕರರಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿದೆ.**

**ಅರ್ಹ ಅಭ್ಯರ್ಥಿಗಳು ದಿನಾಂಕ 7-9-2017 ರಿಂದ 7-10-2017 ರವರೆಗೆ ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ಶುಲ್ಕವನ್ನು ಅಂಚೆ ಕಛೇರಿ ಶಾಖೆಗಳಲ್ಲಿ ದಿನಾಂಕ: 9-10-2017 ರವರೆಗೆ ಪಾವತಿಸಬಹುದಾಗಿದೆ. ಹೆಚ್ಚಿನ ಮಾಹಿತಿಗೆ ಆಯೋಗದ ವೆಬ್‌ಸೈಟ್ http://kpsc.kar.nic.in ಅಥವಾ 080-30574944/ 30574945/ 30574957 ನ್ನು ಸಂಪರ್ಕಿಸಲು ಪ್ರಕಟಣೆ ತಿಳಿಸಿದೆ.**

**Photo Caption:**

**Basavaraj Rayareddi, Minister for Higher Education, Govt. of Karnataka met Montek Singh Ahluwalia, former Dy. Chairman, Planning Commission in New Delhi on 8th September,2017 and discussed about Bengaluru Dr. BR Ambedkar School of Economics.**